**All India Radio: Bangalore**
**National Bulletin In Kannada**
**13.02.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.02.2025 19.35 p.m.**
*******************

ಮುಖ್ಯಾಂಶಗಳು

೧. ಉಭಯ ಸದನಗಳಲ್ಲಿ ವಕ್ಫ್ ತಿದ್ದುಪಡಿ ವಿಧೇಯಕ ೨೦೨೪ರ ಜಂಟಿ ಸಮಿತಿಯ ವರದಿ ಮಂಡನೆ

೨. ಸಂಸತ್ ಬಜೆಟ್ ಅಧಿವೇಶನ; ಶೇಕಡ ೧೧೨ ರಷ್ಟು ಉತ್ಪಾದಕತೆ ದಾಖಲು

೩. ವಿವಿಧ ರಾಷ್ಟ್ರೀಯ ಪಿಂಚಣಿ ಯೋಜನೆಗಳನ್ನು ಒಂದೇ ಸೂರಿನಡಿ ತರಲು ಚಿಂತನೆ - ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವೀಯ

೪. ಅಮೆರಿಕಾದ ರಾಷ್ಟ್ರೀಯ ಗುಪ್ತದಳದ ನಿರ್ದೇಶಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ

***************

ಸರ್ಕಾರಿ ಇಲಾಖೆಗಳು ಹೊಸ ತಂತ್ರಜ್ಞಾನಗಳನ್ನು ಉತ್ತಮವಾಗಿ ಬಳಸಿಕೊಳ್ಳುವ ಮೂಲಕ ತಮ್ಮ ವ್ಯವಸ್ಥೆಗಳನ್ನು ಆಧುನೀಕರಿಸುವುದು ಮತ್ತು ಡಿಜಿಟಲೀಕರಣಗೊಳಿಸುವುದು ಅತ್ಯಗತ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ಇಂದು ಭಾರತೀಯ ನಾಗರಿಕ ಸೇವೆ, ಭಾರತೀಯ ಅಂಚೆ ಮತ್ತು ದೂರಸಂಪರ್ಕ ಸೇವೆಯ ಪ್ರೊಬೇಷನರಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಯುವ ಅಧಿಕಾರಿಗಳು ಸುಧಾರಿತ ತಂತ್ರಜ್ಞಾನ ಮತ್ತು ಕೌಶಲ್ಯಗಳ ಬಗ್ಗೆ ತಿಳಿದಿರಬೇಕು ಹಾಗೂ ನಾಗರಿಕ ಕೇಂದ್ರಿತ, ದಕ್ಷ ಮತ್ತು ಪಾರದರ್ಶಕ ಆಡಳಿತ ವ್ಯವಸ್ಥೆಗಳನ್ನು ರಚಿಸಲು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ತಮ್ಮ ವೃತ್ತಿಜೀವನದಲ್ಲಿ ಉತ್ತಮ ಸಾಧನೆ ಮಾಡಲು ಮತ್ತು ದೇಶದ ಜನರಿಗೆ ಸರ್ಕಾರಿ ಸೇವೆಗಳನ್ನು ಪರಿಣಾಮಕಾರಿಯಾಗಿ ತಲುಪಿಸುವ ನಿಟ್ಟಿನಲ್ಲಿ ಪ್ರಯತ್ನಿಸುವಂತೆ ರಾಷ್ಟ್ರಪತಿಗಳು ಕರೆ ನೀಡಿದರು.

***************

ವಿರೋಧ ಪಕ್ಷಗಳ ಪ್ರತಿಭಟನೆಯ ನಡುವೆಯೇ ವಕ್ಫ್ ತಿದ್ದುಪಡಿ ವಿಧೇಯಕ ೨೦೨೪ರ ಜಂಟಿ ಸಮಿತಿಯ ವರದಿಯನ್ನು ಸಂಸತ್ತಿನ ಎರಡೂ ಸದನಗಳಲ್ಲಿ ಇಂದು ಮಂಡಿಸಲಾಯಿತು.

ಮಧ್ಯಾಹ್ನ ೨ ಗಂಟೆಗೆ ಸದನ ಮುಂದೂಡಿದ ನಂತರ ಲೋಕಸಭೆ ಪುನರಾರಂಭವಾದಾಗ, ಜಂಟಿ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ವರದಿಯನ್ನು ಸದನದಲ್ಲಿ ಮಂಡಿಸಿದರು.

ಈ ವೇಳೆ, ವಿರೋಧ ಪಕ್ಷದ ಸದಸ್ಯರು ಗದ್ದಲ ಸೃಷ್ಟಿಸಿದರು. ಮಧ್ಯ ಪ್ರವೇಶಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ವಿರೋಧ ಪಕ್ಷದ ಸದಸ್ಯರು ಒತ್ತಾಯಿಸಿದಂತೆ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ವರದಿಯಲ್ಲಿ ಭಿನ್ನಾಭಿಪ್ರಾಯ ಕುರಿತಾದ ಟಿಪ್ಪಣಿಗಳನ್ನು ಸೇರಿಸಲು ಅನುಮತಿಸಿದರೆ, ಬಿಜೆಪಿಗೆ ಯಾವುದೇ ಅಭ್ಯಂತರವಿಲ್ಲ ಎಂದು ಸ್ಪಷ್ಟಪಡಿಸಿದರು.

ವರದಿಯನ್ನು ವಿರೋಧಿಸಿ ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷ, ತೃಣಮೂಲ ಕಾಂಗ್ರೆಸ್ ಮತ್ತು ಇತರ ಸದಸ್ಯರು ಸದನದಿಂದ ಹೊರ ನಡೆದರು.

ಇದಕ್ಕೂ ಮುನ್ನ, ಇಂದು ಲೋಕಸಭೆ ಕಲಾಪ ಆರಂಭವಾದಾಗ ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷ ಸೇರಿದಂತೆ ವಿರೋಧ ಪಕ್ಷದ ಸದಸ್ಯರು ಗದ್ದಲ ಸೃಷ್ಟಿಸಿದರು. ಈ ವೇಳೆ, ಮಧ್ಯ ಪ್ರವೇಶಿಸಿದ ಲೋಕಸಭಾಧ್ಯಕ್ಷ ಓಂ ಬಿರ್ಲಾ, ಸದನವು ಪಟ್ಟಿ ಮಾಡಲಾದ ವಿಷಯಗಳನ್ನು ಕೈಗೆತ್ತಿಕೊಳ್ಳಲು ಅವಕಾಶ ನೀಡುವಂತೆ ಒತ್ತಾಯಿಸಿದರು. ಅಲ್ಲದೇ, ವಕ್ಫ್ ತಿದ್ದುಪಡಿ ವಿಧೇಯಕ ೨೦೨೪ರ ಜಂಟಿ ಸಮಿತಿಯ ವರದಿಯನ್ನು ಮಂಡಿಸಿದ ನಂತರ ಸದಸ್ಯರಿಗೆ ಮಾತನಾಡಲು ಅವಕಾಶ ನೀಡುವುದಾಗಿ ಹೇಳಿದರು. ಗದ್ದಲ ಮುಂದುವರೆಯುತ್ತಿದ್ದಂತೆ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು.

ಇನ್ನು ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ಕಲಾಪ ಆರಂಭವಾದಾಗ ಪ್ರತಿಪಕ್ಷಗಳ ಗದ್ದಲದ ನಡುವೆ ಬಿಜೆಪಿ ಸಂಸದೆ ಡಾ.ಮೇಧಾ ವಿಶ್ರಾಮ್ ಕುಲಕರ್ಣಿ ಅವರು ಜಂಟಿ ಸಮಿತಿಯ ವರದಿಯನ್ನು ಮಂಡಿಸಿದರು.

ಈ ವೇಳೆ, ಪ್ರತಿಪಕ್ಷ ಸದಸ್ಯರು ಘೋಷಣೆಗಳು ಕೂಗುವುದನ್ನು ಮುಂದುವರೆಸಿದರು. ಪ್ರತಿಭಟನೆ ಕೈಬಿಡುವಂತೆ ಸಭಾಪತಿ ಜಗದೀಪ್ ಧನ್‌ಕರ್ ಮನವಿ ಮಾಡಿದರು. ಆದರೂ ಗದ್ದಲ ಮುಂದುವರೆದಾಗ ಕಲಾಪವನ್ನು ಮುಂದೂಡಲಾಯಿತು. ಸದನ ಮತ್ತೆ ಸೇರಿದಾಗ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸಮಿತಿ ಸಭೆಗಳಲ್ಲಿ ವಿರೋಧ ಪಕ್ಷದ ಸದಸ್ಯರು ನೀಡಿದ ಭಿನ್ನಾಭಿಪ್ರಾಯದ ಟಿಪ್ಪಣಿಗಳನ್ನು ವರದಿಯಲ್ಲಿ ಸೇರಿಸಿಲ್ಲ ಎಂದು ಆರೋಪಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ವರದಿಯ ಯಾವುದೇ ಭಾಗ, ನಡಾವಳಿ ಮತ್ತು ಭಿನ್ನಾಭಿಪ್ರಾಯದ ಟಿಪ್ಪಣಿಗಳನ್ನು ತೆಗೆದು ಹಾಕಲಾಗಿಲ್ಲ ಎಂದು ಸ್ಪಷ್ಟಪಡಿಸಿದರು. ಈ ವಿಷಯದ ಬಗ್ಗೆ ವಿರೋಧ ಪಕ್ಷವು ಸದನವನ್ನು ದಾರಿತಪ್ಪಿಸುತ್ತಿದೆ ಎಂದು ಆರೋಪಿಸಿದ ಅವರು, ಸಂಸದೀಯ ಸಮಿತಿಯು ನಿಯಮಗಳ ಪ್ರಕಾರ ಸಂಪೂರ್ಣ ನಡಾವಳಿಯನ್ನು ನಡೆಸಿದೆ. ಎಲ್ಲಾ ಭಿನ್ನಾಭಿಪ್ರಾಯದ ಟಿಪ್ಪಣಿಗಳನ್ನು ವರದಿಯ ಅನುಬಂಧದಲ್ಲಿ ಲಗ್ಗತ್ತಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

***************

ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ಹಂತ ಮುಕ್ತಾಯಗೊಂಡಿತು. ಅಧಿವೇಶನದ ಮೊದಲ ಹಂತವು ಶೇಕಡಾ ೧೧೨ ರಷ್ಟು ಉತ್ಪಾದಕತೆಯನ್ನು ದಾಖಲಿಸಿದೆ. ಲೋಕಸಭೆಯ ಮುಂದಿನ ಕಲಾಪವನ್ನು ಮಾರ್ಚ್ ೧೦ಕ್ಕೆ ಮುಂದೂಡಲಾಗಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ತಿಳಿಸಿದ್ದಾರೆ.

ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಷ್ಟ್ರಪತಿಗಳು ಮಾಡಿದ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ೧೭೭ ಸದಸ್ಯರು ೧೭ ಗಂಟೆಗಳಿಗೂ ಹೆಚ್ಚು ಕಾಲ ಭಾಗವಹಿಸಿದ್ದಾರೆ ಎಂದು ಅವರು ಸದನಕ್ಕೆ ಮಾಹಿತಿ ನೀಡಿದರು.

೨೦೨೫-೨೬ ರ ಸಾಮಾನ್ಯ ಬಜೆಟ್ ಮೇಲಿನ ಚರ್ಚೆಯಲ್ಲಿ ೧೭೦ ಸದಸ್ಯರು ಭಾಗವಹಿಸಿದ್ದಾರೆ. ವಕ್ಫ್ ತಿದ್ದುಪಡಿ ವಿಧೇಯಕ ೨೦೨೪ ರ ಜಂಟಿ ಸಮಿತಿಯ ವರದಿಯನ್ನು ಮಂಡಿಸಲಾಗಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು.

ಧ್ವನಿ: ಓಂ ಬಿರ್ಲಾ ೨೦ ಸೆಕೆಂಡ್

***************

ಲೋಕಸಭೆಯಲ್ಲಿ ಇಂದು ಆದಾಯ ತೆರಿಗೆ ವಿಧೇಯಕ ೨೦೨೫ ಅನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದರು.

ಆದಾಯ ತೆರಿಗೆಗೆ ಸಂಬಂಧಿಸಿದ ಕಾನೂನನ್ನು ಕ್ರೋಢೀಕರಿಸುವ ಮತ್ತು ತಿದ್ದುಪಡಿ ಮಾಡುವ ಗುರಿಯನ್ನು ಈ ವಿಧೇಯಕ ಹೊಂದಿದೆ.

ವಿಧೇಯಕದ ಕುರಿತು ಮಾತನಾಡಿದ ಸಚಿವೆ ನಿರ್ಮಲಾ ಸೀತಾರಾಮನ್, ಅಸ್ತಿತ್ವದಲ್ಲಿರುವ ಆದಾಯ ತೆರಿಗೆ ಕಾಯ್ದೆಗೆ ಹೋಲಿಸಿದರೆ ನೂತನ ವಿಧೇಯಕವು ಕಡಿಮೆ ವಿಭಾಗಗಳು ಮತ್ತು ಅಧ್ಯಾಯಗಳನ್ನು ಹೊಂದಿದೆ ಮತ್ತು ಸಾಮಾನ್ಯ ಜನರಿಗೆ ಸುಲಭವಾಗಿ ಅರ್ಥವಾಗುವಂತೆ ಇದನ್ನು ಸರಳೀಕರಿಸಲಾಗಿದೆ ಎಂದು ಹೇಳಿದರು.

ವಿಧೇಯಕವನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸತ್ತಿನ ಆಯ್ಕೆ ಸಮಿತಿಗೆ ಕಳುಹಿಸಬೇಕು. ಅದರ ಪ್ರಕಾರ, ಸಮಿತಿಯು ಮುಂದಿನ ಅಧಿವೇಶನದ ಮೊದಲ ದಿನದಂದು ಈ ಕುರಿತು ವರದಿ ಸಲ್ಲಿಸಬೇಕು ಎಂದರು.

***************

ಮುಂದಿನ ದಿನಗಳಲ್ಲಿ ವಿವಿಧ ರಾಷ್ಟ್ರೀಯ ಪಿಂಚಣಿ ಯೋಜನೆಗಳನ್ನು ಒಂದೇ ಸೂರಿನಡಿ ತರಲು ಕೇಂದ್ರ ಸರ್ಕಾರ ಯೋಜಿಸುತ್ತಿದೆ.

ಈ ಕುರಿತು ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವಿಯಾ, ವಿಶೇಷವಾಗಿ ಅಸಂಘಟಿತ ವಲಯಗಳ ಜನರಿಗೆ ಹಲವಾರು ಪಿಂಚಣಿ ಯೋಜನೆಗಳು ಲಭ್ಯವಿದೆ. ಈ ಯೋಜನೆಗಳಲ್ಲಿ ಅಟಲ್ ಪಿಂಚಣಿ ಯೋಜನೆ, ಪಿಎಂ ಶ್ರಮಿಕ ಮಂಥನ ಮತ್ತು ಪಿಎಂ ಶ್ರಮ ಯೋಗಿ ಮಂಥನ ಸೇರಿವೆ ಎಂದು ಹೇಳಿದರು.

ಫಲಾನುಭವಿ ಮತ್ತು ಸರ್ಕಾರದಿಂದ ಸಮಾನ ಕೊಡುಗೆಯೊಂದಿಗೆ ಈ ಯೋಜನೆಗಳ ಅಡಿಯಲ್ಲಿ ಪ್ರಸ್ತುತ ಸುಮಾರು ೬ ಕೋಟಿ ಜನರು ಪ್ರಯೋಜನ ಪಡೆಯುತ್ತಿದ್ದಾರೆ. ಫಲಾನುಭವಿಗೆ ೬೦ ವರ್ಷ ತುಂಬಿದ ನಂತರ ಈ ಎಲ್ಲಾ ಯೋಜನೆಗಳು ಮೂರರಿಂದ ಐದು ಸಾವಿರ ರೂಪಾಯಿ ಮಾಸಿಕ ಪಿಂಚಣಿಗಳನ್ನು ಒದಗಿಸುತ್ತವೆ ಎಂದು ಸಚಿವರು ವಿವರಿಸಿದರು.

ಎಲ್ಲಾ ರಾಷ್ಟ್ರೀಯ ಪಿಂಚಣಿ ಯೋಜನೆಗಳನ್ನು ಸರಳೀಕರಿಸುವ ಮೂಲಕ ಅವುಗಳನ್ನು ಒಂದೇ ಸೂರಿನಡಿ ತರುವ ಬಗ್ಗೆ ಸರ್ಕಾರ ಚಿಂತಿಸುತ್ತಿದೆ ಎಂದು ಸಚಿವ ಡಾ. ಮನ್ಸುಖ್ ಮಾಂಡವಿಯಾ ತಿಳಿಸಿದರು.

***************

ದೇಶದಲ್ಲಿ ೧೯ ಕೋಟಿಗೂ ಹೆಚ್ಚು ಗ್ರಾಮೀಣ ಕುಟುಂಬಗಳಲ್ಲಿ ೧೫ ಕೋಟಿ ೪೫ ಲಕ್ಷಕ್ಕೂ ಹೆಚ್ಚು ಮನೆಗಳು ಜಲ ಜೀವನ್ ಮಿಷನ್ ಅಡಿಯಲ್ಲಿ ನಲ್ಲಿ ನೀರಿನ ಸಂಪರ್ಕವನ್ನು ಹೊಂದಿವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಈ ಕುರಿತು ಲೋಕಸಭೆಗೆ ಲಿಖಿತ ಉತ್ತರ ನೀಡಿದ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್, ೨೦೧೯ರಲ್ಲಿ ಜಲ ಜೀವನ್ ಮಿಷನ್ ಪ್ರಾರಂಭವಾದ ಸಮಯದಲ್ಲಿ, ಕೇವಲ ೩ ಕೋಟಿ ೨೩ ಲಕ್ಷ ಗ್ರಾಮೀಣ ಕುಟುಂಬಗಳು ನಲ್ಲಿ ನೀರಿನ ಸಂಪರ್ಕಗಳನ್ನು ಹೊಂದಿದ್ದವು ಎಂದು ಹೇಳಿದರು.

ಅಂದಿನಿಂದ ಸುಮಾರು ೧೨ ಕೋಟಿ ೨೨ ಲಕ್ಷ ಗ್ರಾಮೀಣ ಕುಟುಂಬಗಳಿಗೆ ಯೋಜನೆಯಡಿಯಲ್ಲಿ ನಲ್ಲಿ ನೀರಿನ ಸಂಪರ್ಕಗಳನ್ನು ಒದಗಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

***************

ಎರಡು ದಿನಗಳ ಅಮೆರಿಕ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗಿನ ಜಾವ ವಾಷಿಂಗ್ಟನ್ ಡಿಸಿ ತಲುಪಿದರು.

ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರನ್ನು ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾತ್ರ ಮತ್ತು ಇತರೆ ಅಧಿಕಾರಿಗಳು ಸ್ವಾಗತಿಸಿದರು. ನಂತರ ಅವರು, ವಾಷಿಂಗ್‌ಟನ್ ಡಿಸಿಯ ಬ್ಲೇರ್ ಹೌಸ್‌ಗೆ ತೆರಳಿದರು.

ಈ ಸಂದರ್ಭದಲ್ಲಿ ಅವರು, ಅಮೆರಿಕದ ರಾಷ್ಟ್ರೀಯ ಗುಪ್ತದಳದ ನಿರ್ದೇಶಕಿ ತುಳ್ಸಿ ಗಬ್ಬಾರ್ಡ್ ಅವರನ್ನು ಭೇಟಿ ಮಾಡಿದರು. ಈ ವೇಳೆ, ಪ್ರಧಾನಿಯವರು ತುಳ್ಸಿ ಗಬ್ಬಾರ್ಡ್ ಅವರೊಂದಿಗಿನ ತಮ್ಮ ಹಿಂದಿನ ಸಂವಾದಗಳನ್ನು ನೆನಪಿಸಿಕೊಂಡರು. ದ್ವಿಪಕ್ಷೀಯ ಗುಪ್ತಚರ ಸಹಕಾರವನ್ನು ಹೆಚ್ಚಿಸುವ ಬಗ್ಗೆ, ವಿಶೇಷವಾಗಿ ಭಯೋತ್ಪಾದನೆ ನಿಗ್ರಹ, ಸೈಬರ್ ಭದ್ರತೆ, ಬೆದರಿಕೆಗಳು ಮತ್ತು ಕಾರ್ಯತಂತ್ರದ ಗುಪ್ತಚರ ಮಾಹಿತಿ ಹಂಚಿಕೆಯ ಬಗ್ಗೆ ಚರ್ಚಿಸಿದರು. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು. ಸುರಕ್ಷಿತ, ಸ್ಥಿರ ಮತ್ತು ನಿಯಮ ಆಧಾರಿತ ಅಂತಾರಾಷ್ಟ್ರೀಯ ಕ್ರಮಕ್ಕೆ ತಮ್ಮ ಬದ್ಧತೆಯನ್ನು ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದರು.

ಶ್ವೇತಭವನದಲ್ಲಿ ಇಂದು ಉದ್ಯಮಿ ಎಲಾನ್ ಮಸ್ಕ್ ಅವರನ್ನು ಪ್ರಧಾನಿಯವರು ಭೇಟಿಯಾಗಲಿದ್ದಾರೆ.

ನಂತರ ಪ್ರಧಾನಿ ಮೋದಿ ಅವರು ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರೊಂದಿಗೆ ನಿಯೋಗ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಅಲ್ಲದೇ ಅಮೆರಿಕದ ಹಿರಿಯ ಅಧಿಕಾರಿಗಳು, ಉದ್ಯಮಿಗಳುಇ ಮತ್ತು ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

***************

ಇಂದು ವಿಶ್ವ ರೇಡಿಯೋ ದಿನ. ಪ್ರತಿ ವರ್ಷ ಫೆಬ್ರವರಿ ೧೩ ರಂದು, ವಿಶ್ವ ರೇಡಿಯೋ ದಿನ ಆಚರಿಸಲಾಗುತ್ತದೆ. ರೇಡಿಯೋ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ರೇಡಿಯೋ- ಮಾಹಿತಿ, ಮನೋರಂಜನೆ ಮತ್ತು ಶಿಕ್ಷಣ ನೀಡುವ ಪ್ರಮುಖ ಮಾಧ್ಯಮವಾಗಿದೆ.

ರೇಡಿಯೊ ಜನರ ಜೀವನವನ್ನು ಸ್ಪರ್ಶಿಸುವ ಮತ್ತು ಜಗತ್ತಿನ ಮೂಲೆ ಮೂಲೆಯಿಂದ ಶ್ರೋತೃಗಳನ್ನು ಒಟ್ಟುಗೂಡಿಸುವ ವಿಶಿಷ್ಟ ಶಕ್ತಿ ಹೊಂದಿದೆ. ಈ ವರ್ಷದ ವಿಶ್ವ ರೇಡಿಯೋ ದಿನದ ವಿಷಯ - ರೇಡಿಯೋ ಮತ್ತು ಹವಾಮಾನ ಬದಲಾವಣೆ ಎಂಬುದಾಗಿದೆ.

ವಿಶ್ವ ರೇಡಿಯೋ ದಿನದಂದು ಶುಭಾಷಯ ಕೋರಿದ ಪ್ರಧಾನಿ ನರೇಂದ್ರ ಮೋದಿ, ರೇಡಿಯೋ ಅನೇಕ ಜನರಿಗೆ ಕಲಾತೀತ ಜೀವನಾಡಿಯಾಗಿದೆ. ಇದು ಜನರಿಗೆ ಮಾಹಿತಿ ನೀಡುತ್ತದೆ, ಪ್ರೇರೇಪಿಸುತ್ತದೆ ಮತ್ತು ಸಂಪರ್ಕಿಸುತ್ತದೆ. ಸುದ್ದಿ ಮತ್ತು ಸಂಸ್ಕೃತಿಯಿಂದ ಹಿಡಿದು ಸಂಗೀತ ಮತ್ತು ಕಥೆ ಹೇಳುವಿಕೆವರೆಗೆ ರೇಡಿಯೋ ಸೃಜನಶೀಲತೆಯನ್ನು ಪ್ರೇರೇಪಿಸುವ ಪ್ರಬಲ ಮಾಧ್ಯಮವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ಹೇಳಿದ್ದಾರೆ.

********ಮುಕ್ತಾಯ*******